**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು** | : | **ಶ್ರೀ ರಘು ಆರ್. (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **244** |
| **ಉತ್ತರಿಸಬೇಕಾದ ದಿನಾಂಕ** | : | **18.08.2026** |
| **ಉತ್ತರಿಸಬೇಕಾದ ಸಚಿವರು** | : | **ಸಹಕಾರ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಇಲಾಖೆಯಲ್ಲಿ ಸಹಕಾರ ಸಂಘಗಳು ಹಾಗೂ ಸಹಕಾರಿ ಬ್ಯಾಂಕ್‌ಗಳಲ್ಲಿ ಹಿಂದುಳಿದ ವರ್ಗಗಳ ಪ್ರತಿನಿಧಿಗಳಿಗೆ ಮೀಸಲಾತಿ ಒದಗಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಸಹಕಾರ ಇಲಾಖೆಯಲ್ಲಿ ಸಹಕಾರ ಸಂಘಗಳು ಹಾಗೂ ಸಹಕಾರ ಬ್ಯಾಂಕ್‌ಗಳ ಆಡಳಿತ ಮಂಡಳಿಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 28-ಎ (3) (iii) ರಲ್ಲಿ ವಿವರಿಸಿರುವಂತೆ ಪ್ರತಿ ಸಹಕಾರ ಸಂಘದ ಆಡಳಿತ ಮಂಡಳಿಯಲ್ಲಿ ಹಿಂದುಳಿದ ವರ್ಗದವರಿಗೆ ಎರಡು ಸ್ಥಾನಗಳನ್ನು ಚುನಾವಣೆ ಮೂಲಕ ಭರ್ತಿ ಮಾಡತಕ್ಕದು: ಪರಂತು ಬಿಡಿ ವ್ಯಕ್ತಿಗಳನ್ನು ಸದಸ್ಯರನ್ನಾಗಿ ಉಳ್ಳ ಮತ್ತು ಅಂಥ ವರ್ಗದ ಅಥವಾ ಗುಂಪಿನ ಸದಸ್ಯರನ್ನು ಹೊಂದಿರುವ ಪ್ರತಿಯೊಂದು ಸಹಕಾರ ಸಂಘದ ಮಂಡಳಿಯಲ್ಲಿ ಅಂಥ ಮೀಸಲಾತಿಯನ್ನು ಮಾಡತಕ್ಕದ್ದು ಎಂದಿರುತ್ತದೆ. |
| ಆ) | ಸದರಿ ಹಿಂದುಳಿದ ವರ್ಗಗಳ ಪ್ರತಿನಿಧಿಗಳನ್ನು ಆಯ್ಕೆ ಮಾಡಲು ಸರ್ಕಾರ ಕೈಗೊಂಡಿರುವ ಮಾನದಂಡಗಳೇನು? (ಮಾಹಿತಿ ನೀಡುವುದು) | ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 14-ಎಎಲ್‌ಎ ರಲ್ಲಿ ಸಹಕಾರ ಸಂಘಗಳು ಹಾಗೂ ಸಹಕಾರಿ ಬ್ಯಾಂಕ್‌ಗಳಲ್ಲಿ ಹಿಂದುಳಿದ ವರ್ಗಗಳ ಪ್ರತಿನಿಧಿಗಳಿಗೆ ಎರಡು ಸ್ಥಾನಗಳನ್ನು ಕೆಳಕಂಡ ವಿಧಾನದಂತೆ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>(i) ಮೊದಲ ಅವಧಿಯಲ್ಲಿ ಎಲ್ಲಾ ಸ್ಥಾನಗಳನ್ನು ಪ್ರವರ್ಗ-ಎ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು; ಮತ್ತು<br>(ii) ಎರಡನೇ ಮತ್ತು ಮೂರನೇ ಅವಧಿಗೆ ಎಲ್ಲಾ ಸ್ಥಾನಗಳನ್ನು ಪ್ರವರ್ಗ-ಎ ಮತ್ತು ಪ್ರವರ್ಗ-ಬಿ ಅಭ್ಯರ್ಥಿಗಳಿಂದ ಭರ್ತಿ ಮಾಡತಕ್ಕದ್ದು; ಮತ್ತು<br>(iii) ನಾಲ್ಕನೇ ಅವಧಿಗೆ ಎಲ್ಲಾ ಸ್ಥಾನಗಳನ್ನೂ ಪ್ರವರ್ಗ-ಎ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 14-ಎ(3) ರಲ್ಲಿ ವಿವರಿಸಿರುವಂತೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಚುನಾವಣಾ ಠೇವಣಿಯಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗಿಂತ ಶೇಕಡ 50 ರಷ್ಟು ರಿಯಾಯಿತಿ ನೀಡಿ ಅವಕಾಶ ಕಲ್ಪಿಸಲಾಗಿರುತ್ತದೆ. |

**ಸಂಖ್ಯೆ: ಸಿಒ 81 ಸಿಎಲ್‌ಎಂ 2026**

**(ಲಕ್ಷ್ಮಣ್ ಎಸ್ ಸವದಿ)**
**ಸಹಕಾರ ಸಚಿವರು**